ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 5/7/19

# ಆನಂದ ಸಿಂಗ್ ವಿರುದ್ಧ ಸ್ಪೀಕರ್‌ಗೆ ದೂರು

ಸಂ.ಕ. ಸಮಾಚಾರ ಬೆಂಗಳೂರು

ಶಾಸಕ ಆನಂದ ಸಿಂಗ್ ಅವರ ರಾಜೀನಾಮೆಯನ್ನು ಯಾವುದೇ ಕಾರಣಕ್ಕೂ ಅಂಗೀಕರಿಸಬಾರದು ಎಂದು ಕಾಂಗ್ರೆಸ್ ವಿಧಾನಸಭಾಧ್ಯಕ್ಷರಿಗೆ ದೂರು ನೀಡಿದೆ.

ಗುರುವಾರ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ ಖಂಡ್ರೆ ಅವರುಗಳು ವಿಧಾನಸಭಾಧ್ಯಕ್ಷರನ್ನು ಭೇಟಿ ಮಾಡಿ ಆನಂದ ಸಿಂಗ್ ಅವರು ನಿಯಮಾವಳಿ ಪ್ರಕಾರ ರಾಜೀನಾಮೆ ನೀಡಿಲ್ಲ. ಅವರು ಕಾಂಗ್ರೆಸ್ ಪಕ್ಷದಿಂದ ಬಿ ಫಾರಂ ಪಡೆದು ಸ್ಪರ್ಧಿಸಿ ವಿಧಾನಸಭೆಗೆ ಆಯ್ಕೆಯಾಗಿದ್ದಾರೆ. ಅವರು ರಾಜೀನಾಮೆ ನೀಡುವ ಮುನ್ನ ಕಾಂಗ್ರೆಸ್ ಪಕ್ಷಕ್ಕೆ ಮಾಹಿತಿ ನೀಡಿಲ್ಲ. ಇದರಿಂದ ಅವರು ನೀಡಿರುವ ರಾಜೀನಾಮೆಯನ್ನು ಅಂಗೀಕಾರ ಮಾಡಬಾರದು ಎಂದು ಮನವಿ ಮಾಡಿಕೊಂಡಿದ್ದಾರೆ.

ಸ್ಪೀಕರ್ ಅವರನ್ನು ಭೇಟಿ ಮಾಡಿದ ನಂತರ ಈಶ್ವರ್ ಖಂಡ್ರೆ ಅವರು ಸುದ್ದಿಗಾರರ ಜೊತೆ ಮಾತನಾಡಿ, ಆನಂದಸಿಂಗ್ ವಿಜಯನಗರ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾಗಿದ್ದಾರೆ. ಅವರಿಗೆ ಕಾಂಗ್ರೆಸ್ ಪಕ್ಷದಿಂದ ಬಿ. ಫಾರಂ ನೀಡಿದ್ದೇವೆ. ಅವರು ಈಗ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಅವರು ರಾಜೀನಾಮೆ ನೀಡುವಾಗ ಪಕ್ಷಕ್ಕೆ ಮಾಹಿತಿ ನೀಡಬೇಕಾಗಿತ್ತು. ಈ ಕಾರ್ಯ ಮಾಡಿಲ್ಲವಾದ್ದರಿಂದ ಅವರ ರಾಜೀನಾಮೆಯನ್ನು ಅಂಗೀಕರಿಸಬಾರದು ಎಂದು ಸ್ಪೀಕರ್ ಅವರಿಗೆ ಮನವಿ ಮಾಡಿಕೊಂಡಿದ್ದೇವೆ ಅಷ್ಟೆ. ಆನಂದ ಸಿಂಗ್ ವಿರುದ್ಧ ಯಾವುದೇ ದೂರನ್ನು ನೀಡಿಲ್ಲ ಎಂದರು.